**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು**

**ಸತ್ರ ಮೊಕದ್ದಮೆ ನಂಃ 43/2024**

| | | |
|---|---|---|
| ಸಾಕ್ಷಿದಾರರ ಹೆಸರು | - ಗುರುರಾಜ್ ಅರಸ್ | ಪಿಡಬ್ಲ್ಯೂ- 02 |
| ತಂದೆಯ ಹೆಸರು | - ದೇವರಾಜ್ ಅರಸ್ | ಸಿಡಬ್ಲ್ಯೂ -03 |
| ವಯಸ್ಸು | - 38 ವರ್ಷ | |
| ಉದ್ಯೋಗ | - ಕೂಲಿ ಕೆಲಸ | |
| ವಾಸ ಸ್ಥಳ | - ಸಖರಾಯಪಟ್ಟಣ | |

ದಿನಾಂಕಃ 10-02-2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-

1. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ಯಾರೆಂದು ನನಗೆ ಗೊತ್ತಿಲ್ಲ. ಚಾಸಾ.1, ಚಾಸಾ.8 ಮತ್ತು ಸಹ ಪಂಚರಾದ ಫ್ರಾಸಾ.1 ನನಗೆ ಗೊತ್ತಿಲ್ಲ.

**2.** ಸಾಕ್ಷಿಗೆ ಎರಡು ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಗಳು ದಿಃ 23-02-2023 ರಂದು ಪಂಚನಾಮೆಗೆ ಸಹಕರಿಸುವಂತೆ ಸಖರಾಯಪಟ್ಟಣ ಪೊಲೀಸರು ಸಾಕ್ಷಿಗೆ ನೀಡಿದ್ದಾರೆ ಎನ್ನಲಾದ ನೋಟೀಸ್ ಮತ್ತು ಅದೇ ದಿನ ಸಾಕ್ಷಿಯ ಸಮಕ್ಷಮ ಜರುಗಿಸಿದ್ದಾರೆ ಎನ್ನಲಾದ ಪಂಚನಾಮೆಗಳಾಗಿದ್ದು ಅವುಗಳನ್ನು ಈಗಾಗಲೇ ಕ್ರಮವಾಗಿ ನಿಪಿ.1 ಮತ್ತು ನಿಪಿ.2 ಎಂದು ಗುರುತಿಸಲಾಗಿದ್ದು, ಅವುಗಳಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಮತ್ತು ನಿಪಿ.2(ಬಿ) ಎಂದು

ಗುರುತಿಸಲಾಯಿತು.

**3.** ಈಗ್ಗೆ 3 ವರ್ಷಗಳ ಹಿಂದೆ ಸದರಿ ಸಹಿಗಳನ್ನು ಸಖರಾಯಪಟ್ಟಣ ಪೊಲೀಸ್ ಠಾಣೆಯಲ್ಲಿ ಪೊಲೀಸರು ಹೇಳಿದ ಮೇರೆಗೆ ಮಾಡಿದ್ದೆನು, ಆದರೆ ಯಾವ ವಿಚಾರಕ್ಕೆ ಎಂದು ನನಗೆ ಗೊತ್ತಿಲ್ಲ. ನಾನು ಸಹಿ ಮಾಡಿರುವ ದಾಖಲೆಗಳಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ ಮತ್ತು ಅದನ್ನು ಪೊಲೀಸರು ನನಗೆ ಓದಿ ಹೇಳಿಲ್ಲ. ನನ್ನನ್ನು ಹೊರತುಪಡಿಸಿ ಸದರಿ ದಾಖಲೆಗೆ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಏನನ್ನು ಅಮಾನತು ಪಡಿಸಿಕೊಂಡಿಲ್ಲ.

4. ಸಾಕ್ಷಿಗೆ ಎರಡು ಫೋಟೋಗಳನ್ನು ತೋರಿಸಲಾಗಿ ಅವುಗಳಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಫೋಟೋಗಳನ್ನು ಈಗಾಗಲೇ ನಿಪಿ.3 ಮತ್ತು ಪಿ.4 ಎಂದು ಗುರುತಿಸಲಾಗಿರುತ್ತದೆ. ಪೊಲೀಸರು ಹೇಳಿದ ಮೇರೆಗೆ ಸದರಿ ಫೋಟೋಗಳಿಗೆ ನಿಂತುಕೊಂಡಿದ್ದೇನೆ. ಆದರೆ ಸದರಿ ಫೋಟೋಗಳನ್ನು ಯಾವ ವಿಚಾರಕ್ಕೆ ತೆಗೆದುಕೊಳ್ಳಲಾಗಿದೆ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ-</u>

**5.** ದಿಃ 23-02-2023 ರಂದು ಪಂಚನಾಮೆಗೆ ಸಹಕರಿಸುವಂತೆ ಸಖರಾಯಪಟ್ಟಣ ಪೊಲೀಸರು ನಿಮಗೆ ಮತ್ತು ಪ್ರಾಸಾ.1 ರವರಿಗೆ ನಿಪಿ.1 ರಂತೆ ನೋಟೀಸನ್ನು ಜಾರಿ ಮಾಡಿದ್ದಾರೆ ಎಂದರೆ ಸರಿಯಲ್ಲ. ಅದಕ್ಕೆ ನೀವು ಒಪ್ಪಿಕೊಂಡಿದ್ದೀರಿ ಎಂದರೆ ಸರಿಯಲ್ಲ. ನಂತರ ಸಖರಾಯಪಟ್ಟಣದ ರಂಗನಾಥ ಸ್ವಾಮಿ ದೇವಸ್ಥಾನದಿಂದ ಅಂತರಘಟ್ಟಮ್ಮ ದೇವಸ್ಥಾನದ ಕಡೆಗೆ ಹೋಗುವ ರಸ್ತೆಯಲ್ಲಿ ಹಾಜರಿದ್ದ ಚಾಸಾ.8 ರವರು ಸದರಿ ಸ್ಥಳದಲ್ಲಿ ದಿಃ 21-02-2023 ರಂದು ರಾತ್ರಿ 9.30 ಗಂಟೆಗೆ ತಾನು ತನ್ನ ಸ್ನೇಹಿತರಾದ ಚಾಸಾ.9 ಮತ್ತು 10 ರವರು ಮಾತನಾಡುತ್ತಿದ್ದಾಗ ಆರೋಪಿ ಇನ್ನೊಬ್ಬ ವ್ಯಕ್ತಿಯೊಂದಿಗೆ ಬೈಕಿನಲ್ಲಿ ಬಂದು ತಮ್ಮ ಬುಲೇಟ್ ವಾಹನದಲ್ಲಿ ಹೋಗುತ್ತಿದ್ದ ಚಾಸಾ.1 ರವರನ್ನು ಅಡ್ಡಗಟ್ಟಿ ಕೆಟ್ಟ ಮಾತುಗಳಿಂದ ಬೈದಿದ್ದಾಗಿ, ನಂತರ ಆರೋಪಿ ಚಾಸಾ.1 ರವರ ತಲೆಗೆ ಮಚ್ಚಿನಿಂದ ಕೊಲೆ ಮಾಡುವ ಉದ್ದೇಶದಿಂದ ಹೊಡೆದಿದ್ದಾಗಿ, ಚಾಕುವಿನಿಂದ ಚಾಸಾ.1 ರವರ ಎದೆ, ಹೊಟ್ಟೆ ಮತ್ತು ಬೆನ್ನಿನ ಭಾಗಕ್ಕೆ ತಿವಿದಿದ್ದಾಗಿ ತಿಳಿಸಿದ ಮೇರೆಗೆ ಸದರಿ ಸ್ಥಳದಲ್ಲಿ ಪೊಲೀಸರು ನಮ್ಮ ಸಮಕ್ಷಮ ನಿಪಿ.2 ರಂತೆ ಬೆಳಿಗ್ಗೆ 9.30 ಗಂಟೆಯಿಂದ 10.30 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿ ಅದಕ್ಕೆ ನಮ್ಮ ಸಹಿಗಳನ್ನು ಪಡೆದಿದ್ದಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಕಾಲಕ್ಕೆ ರಕ್ತ ಮಿಶ್ರಿತ ಮಣ್ಣು ಮತ್ತು ಸಾದಾ ಮಣ್ಣನ್ನು ಪೊಲೀಸರು ಪ್ರತ್ಯೇಕವಾಗಿ ನಮ್ಮ ಸಮಕ್ಷಮ ಕವರಿನಲ್ಲಿ ಹಾಕಿ ಅಮಾನತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಆ ಸಮಯದಲ್ಲಿ

ಪೊಲೀಸರು ನಿಪಿ.3 ಮತ್ತು ಪಿ.4 ರಂತೆ ಫೋಟೋಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

6. ನಾನು 9 ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ನನಗೆ ಕನ್ನಡ ಭಾಷೆಯಲ್ಲಿ ಓದಲು ಬರೆಯಲು ಬರುತ್ತದೆ. ನೀವು ಯಾವುದೇ ದಾಖಲೆಗೆ ಅದರಲ್ಲಿ ಬರೆದಿರುವುದನ್ನು ಓದಿ ತಿಳಿದುಕೊಳ್ಳದೇ ಸಹಿ ಮಾಡುವುದಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದು ಆ ದಿನ ನಾನು ಕೆಲಸಕ್ಕೆ ಹೋಗುತ್ತಿದ್ದೆನು ಹಾಗಾಗಿ ಆ ದಿನ ಪೊಲೀಸರು ನನ್ನ ಸಹಿ ಪಡೆದುಕೊಂಡ ದಾಖಲೆಯಲ್ಲಿ ಬರೆದಿದ್ದನ್ನು ನಾನು ಓದಲಿಲ್ಲ ಮತ್ತು ತಿಳಿದುಕೊಳ್ಳಲಿಲ್ಲ ಎನ್ನುತ್ತಾರೆ. ಚಾಸಾ.1 ರವರು ಈಗ್ಗೆ 2 ತಿಂಗಳ ಹಿಂದೆ ಕೊಲೆಯಾದರು ಎಂದರೆ ಸರಿ. ಆತ ಈಗ ಬದುಕಿಲ್ಲ ಎನ್ನುವ ಕಾರಣಕ್ಕೆ ನೀವು ಆರೋಪಿಯೊಂದಿಗೆ ಶಾಮೀಲಾಗಿ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಪಾಟೀ ಸವಾಲು: ಆರೋಪಿಯ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.
ಸಹಿ/-
(ಭಾನುಮತಿ ಬಿ.ಸಿ)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ